## ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ

## ಸಿ.ಸಿ. ಸಂಖ್ಯೆಃ **478/2026**

| | | |
|---|---|---|
| ಪಿರ್ಯಾದಿ | : | ರಾಜ್ಯ, ಪರವಾಗಿ ಮೂಡಿಗೆರೆ ಪೊಲೀಸ್ ಠಾಣೆ,<br>ಮೂಡಿಗೆರೆ ತಾಲ್ಲೂಕು. |

ವಿರುದ್ಧ

| | | |
|---|---|---|
| ಆರೋಪಿತರು | : **1.** | ಚಂದ್ರೇಶ.ಹೆಚ್.ಡಿ,<br>ವಯಸ್ಸು ಸುಮಾರು 46 ವರ್ಷ,<br>ಬಿನ್ ದಿಬ್ಬೇಗೌಡ, ವಾಸಃ ಬಾಳೇಹಳ್ಳಿ ಗ್ರಾಮ,<br>ಮೂಡಿಗೆರೆ ತಾಲ್ಲೂಕು. |
| | **2.** | ದರ್ಶನ್.ಹೆಚ್.ಎಸ್,<br>ವಯಸ್ಸು ಸುಮಾರು 25 ವರ್ಷ,<br>ಬಿನ್ ಸೋಮಶೇಖರ್, ಕ್ಯಾಷಿಯರ್ ವೃತ್ತಿ,<br>ವಾಸಃ ಹಂದಿನಕೆರೆ ಗ್ರಾಮ,<br>ಜೋಡಿಹಂದಿನಕೆರೆ ಅಂಚೆ,<br>ಹಾಸನ ಜಿಲ್ಲೆ. |

## ದೋಷಾರೋಪಣೆ

ಶ್ರೀ ಯೋಗೇಶ.ಎಂ.ಆರ್, ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಮೂಡಿಗೆರೆ, ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ-

ಮೊದಲನೇಯದಾಗಿ, ದಿನಾಂಕ 28.01.2026 ರಂದು ಸಂಜೆ 6.00 ರ ಸಮಯದಲ್ಲಿ ಮೂಡಿಗೆರೆ ಪೊಲೀಸ್ ಠಾಣಾ ವ್ಯಾಪ್ತಿಯ ಬಾಳೇಹಳ್ಳಿ ಗ್ರಾಮದ 1 ನೇ ಆರೋಪಿಯಾದ ನೀವು ನಿಮ್ಮ ಮನೆ ಮತ್ತು ಪಕ್ಕದ ಜಾಗದಲ್ಲಿ ಅಕ್ರಮವಾಗಿ ಲಾಭ ಗಳಿಸುವ ಉದ್ದೇಶದಿಂದ ಯಾವುದೇ ಪರವಾನಗಿ ಇಲ್ಲದೇ ಕಾನೂನು ಬಾಹಿರವಾಗಿ 90 ಎಂ.ಎಲ್ ನ 17, ಒರಿಜಿನಲ್ ಚಾಯ್ಸ್ ಡಿಲಕ್ಸ್ ವಿಸ್ಕಿಯ ಮದ್ಯ ತುಂಬಿದ ಟೆಟ್ರಾ ಪ್ಯಾಕೆಟ್ ಗಳನ್ನು ಮತ್ತು 90 ಎಂ.ಎಲ್ ನ 20, ಡಿ.ಕೆ ಡಬಲ್ ಕಿಕ್ ಫೈನ್ ವಿಸ್ಕಿಯ ಮದ್ಯ ತುಂಬಿದ ಟೆಟ್ರಾ ಪ್ಯಾಕೆಟ್ ಗಳನ್ನು ನಿಮ್ಮ ವಶದಲ್ಲಿಟ್ಟುಕೊಂಡಿದ್ದು, ಪೊಲೀಸರು ನಡೆಸಿದ ದಾಳಿ ಕಾಲಕ್ಕೆ ಸಿಕ್ಕಿರುತ್ತೀರಿ. ಈ ರೀತ್ಯಾ 1 ನೇ ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ **32** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ*?*

ಎರಡನೇಯದಾಗಿ, ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ 1 ನೇ ಆರೋಪಿಯಾದ ನೀವು 90 ಎಂ.ಎಲ್ ನ 17, ಒರಿಜಿನಲ್ ಚಾಯ್ಸ್ ಡಿಲಕ್ಸ್ ವಿಸ್ಕಿಯ ಮದ್ಯ ತುಂಬಿದ ಟೆಟ್ರಾ ಪ್ಯಾಕೆಟ್ ಗಳನ್ನು ಮತ್ತು 90 ಎಂ.ಎಲ್ ನ 20, ಡಿ.ಕೆ ಡಬಲ್ ಕಿಕ್ ಫೈನ್ ವಿಸ್ಕಿಯ ಮದ್ಯ ತುಂಬಿದ ಟೆಟ್ರಾ ಪ್ಯಾಕೆಟ್ ಗಳನ್ನು ಯಾವುದೇ ಪಾಸ್ ಅಥವಾ ಪರವಾನಗಿ ಇಲ್ಲದೇ ಅಕ್ರಮವಾಗಿ ನಿಮ್ಮ ವಶದಲ್ಲಿಟ್ಟುಕೊಂಡು ಪೊಲೀಸರು ನಡೆಸಿದ ದಾಳಿ ಕಾಲಕ್ಕೆ ಸಿಕ್ಕಿರುತ್ತೀರಿ. ಈ ರೀತ್ಯಾ 1 ನೇ ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ **34** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

ಕೊನೇಯದಾಗಿ, ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ 2 ನೇ ಆರೋಪಿಯಾದ ನೀವು 90 ಎಂ.ಎಲ್ ನ 17, ಒರಿಜಿನಲ್ ಚಾಯ್ಸ್ ಡಿಲಕ್ಸ್ ವಿಸ್ಕಿಯ ಮದ್ಯ ತುಂಬಿದ ಟೆಟ್ರಾ ಪ್ಯಾಕೆಟ್ ಗಳನ್ನು ಮತ್ತು 90 ಎಂ.ಎಲ್ ನ 20, ಡಿ.ಕೆ ಡಬಲ್ ಕಿಕ್ ಫೈನ್ ವಿಸ್ಕಿಯ ಮದ್ಯ ತುಂಬಿದ ಟೆಟ್ರಾ ಪ್ಯಾಕೆಟ್ ಗಳನ್ನು 1 ನೇ ಆರೋಪಿಗೆ ಪರ್ಮಿಟ್ ನಲ್ಲಿ ಕಂಡ ಮಿತಿಗಿಂತ ಹೆಚ್ಚಾಗಿ ಮದ್ಯವನ್ನು ಮಾರಾಟ ಮಾಡಿರುತ್ತೀರಿ. ಈ ರೀತ್ಯಾ 2 ನೇ ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ **36(ಬಿ)** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

ಈ ಮೇಲ್ಕಂಡ ದೋಷಾರೋಪಣೆಗೆ ನೀವು ವಿಚಾರಣೆಗೆ ಗುರಿಯಾಗಬೇಕೆಂದು ನಾನು ಈ ಮೂಲಕ ನಿರ್ದೇಶಿಸಿದ್ದೇನೆ.

***Sd/-***

**( ಯೋಗೇಶ.ಎಂ.ಆರ್ )**
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿ., ಮೂಡಿಗೆರೆ.

ಪ್ರಃ 1. ಈಗ ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿದ್ದೀರಾ? ಅವುಗಳು ನಿಮಗೆ ಅರ್ಥವಾಯಿತೇ?

1 ನೇ ಆರೋಪಿಯ ಉತ್ತರಃ

2 ನೇ ಆರೋಪಿಯ ಉತ್ತರಃ

ಪ್ರಃ 2. ನೀವು ದೋಷಾರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

1 ನೇ ಆರೋಪಿಯ ಉತ್ತರಃ

2 ನೇ ಆರೋಪಿಯ ಉತ್ತರಃ

(ಆರೋಪಿಗೆ ದೋಷಾರೋಪಣೆಯನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ).

***Sd/-***

ದಿನಾಂಕ: 02.07.2026
ಮೂಡಿಗೆರೆ.

( ಯೋಗೇಶ.ಎಂ.ಆರ್ )
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿ., ಮೂಡಿಗೆರೆ.

1 ನೇ ಆರೋಪಿಯ ಸಹಿ

2 ನೇ ಆರೋಪಿಯ ಸಹಿ